ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ಮೈಸೂರಿನ ಚಾಮುಂಡಿ ಬೆಟ್ಟದಲ್ಲಿ ಭಕ್ತಾಧಿಗಳಿಗೆ ಅನುಕೂಲ ಕಲ್ಪಿಸುವ ಬಗ್ಗೆ

ಶ್ರೀಸುನೀಲ್ ಸುಬ್ರಮಣಿ ಎಂ.ಪಿ., (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ):-

296 (286) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ಜಿಲ್ಲೆ ಚಾಮುಂಡಿ ಬೆಟ್ಟದಲ್ಲಿರುವ ಮುಜರಾಯಿ ದೇವಾಲಯಗಳು ಯಾವುವು; ಇಲ್ಲಿಗೆ ಬರುವ ಭಕ್ತಾಧಿಗಳಿಗೆ ಇಲಾಖೆ ವತಿಯಿಂದ ಒದಗಿಸಲಾಗಿರುವ ಅನುಕೂಲತೆಗಳು ಯಾವುವು; (ವಿವರ ನೀಡುವುದು)

(ಆ) ಇಲ್ಲಿಗೆ ಬರುವ ಭಕ್ತಾಧಿಗಳಿಗೆ ಕೈ-ಕಾಲುಗಳನ್ನು ತೊಳೆಯಲು ನೀರಿನ ಅನುಕೂಲತೆಯನ್ನು ಮಾಡಲಾಗಿದೆಯೇ; ಇಲ್ಲದಿದ್ದಲ್ಲಿ ನೀರಿನ ಅನುಕೂಲತೆಯನ್ನು ಮಾಡಲು ಯಾವ ಕ್ರಮ ಕೈಗೊಳ್ಳಲಾಗುತ್ತದೆ ; (ವಿವರ ನೀಡುವುದು)

(ಇ) ದೇವರ ದರ್ಶನಕ್ಕೆ ಬೆಟ್ಟ ಹತ್ತಿ ಬರುವ ಭಕ್ತರಿಗೆ ತಿರುಪತಿಯ ಮಾದರಿಯಲ್ಲಿ ಶೀಘ್ರ ದರ್ಶನಕ್ಕೆ ಚೀಟಿ ನೀಡುವ ಪದ್ಧತಿ ಕೈಗೊಳ್ಳಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ? (ವಿವರ ನೀಡುವುದು)